ಜೆಎಸ್‌ಎಸ್ ಮಹಾವಿದ್ಯಾಪೀಠ

ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಸ್ವಾಯತ್ತ)

ಊಟಿ ರಸ್ತೆ, ಮೈಸೂರು – 570 025

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

ಕ: 0821–2548236 & 2548380. ಈಂಫಿ: 0821–2548238 ಇ–ಟಚಿಟ: ರಿಚಿಣಣಾಟಿಂಟಂಣ@ರಟಚಿಟ.ಛಿಂಟ ಫಜಛುಣಜ: ಎಖಖಅಂಅಖ.ಜಜಣ.ಎಟಿ

ದಿನಾಂಕ: 08.12.2023

ಭಾರತೀಯ ಭಾಷಾ ಉತ್ಸವದ ಅಂಗವಾಗಿ ರಾಜ್ಯಮಟ್ಟದ ಭಾಷಣ ಸ್ಪರ್ಧೆ

ಡಿಸೆಂಬರ್ 11, 2023 ರಂದು ನಡೆಯುವ ಭಾರತೀಯ ಭಾಷಾ ಉತ್ಸವದ ಅಂಗವಾಗಿ ಭಾರತೀಯ ಭಾಷಾ ಸಂಸ್ಥಾನ, ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ ಹಾಗೂ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ಸಹಯೋಗದೊಂದಿಗೆ ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಾಲೇಜಿನಲ್ಲಿ 'ಭಾರತೀಯ ಭಾಷೆಗಳು ಹಲವು–ಭಾವ ಒಂದು' ಎಂಬ ವಿಷಯ ಕುರಿತು ರಾಜ್ಯಮಟ್ಟದ ಭಾಷಣ ಸ್ಪರ್ಧೆಯನ್ನು ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿತ್ತು.

ಸ್ಪರ್ಧೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಐವತ್ತೆರಡು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಸ್ಪರ್ಧೆಯಲ್ಲಿ ಜೆಎಸ್‌ಎಸ್ ಕಾಲೇಜಿನ ಆರ್.ವಿ. ಅನನ್ಯ (ಪ್ರಥಮ), ದೆಹಲಿಯ ಇಂದಿರಾಗಾಂಧಿ ಮುಕ್ತ ವಿಶ್ವವಿದ್ಯಾಲಯದ ಎನ್. ಲಕ್ಷ್ಮಿ (ದ್ವಿತೀಯ), ಜೆಎಸ್‌ಎಸ್ ಕಾಲೇಜಿನ ಆರ್. ಕುಸುಮಾಬಾಯಿ (ತೃತೀಯ) ಬಹುಮಾನಗಳನ್ನು ಪಡೆದುಕೊಂಡರು. ಸ್ಪರ್ಧೆಯಲ್ಲಿ ವಿಜೇತರಾದ ಇವರಿಗೆ ಡಿಸೆಂಬರ್ 11, 2023 ರಂದು ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ನಡೆಯುವ ಮುಖ್ಯ ಸಭಾಕಾರ್ಯಕ್ರಮದಲ್ಲಿ ಬಹುಮಾನಗಳನ್ನು ವಿತರಿಸಲಾಗುತ್ತದೆ. ಶಾಸ್ತ್ರೀಯ ಕನ್ನಡ ಅತ್ಯುನ್ನತ ಕೇಂದ್ರದ ಹಿರಿಯ ಸಂಶೋಧಕರಾದ ಡಾ. ಆರ್. ಚಲಪತಿ ಮತ್ತು ಜೆಎಸ್‌ಎಸ್ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಎನ್.ಎಂ. ಮಹೇಶ್ವರಿ ಅವರು ಸ್ಪರ್ಧೆಯ ತೀರ್ಪುಗಾರರಾಗಿದ್ದರು.

ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕರಾದ ಪ್ರೊ. ನೀಲಗಿರಿ ಎಂ. ತಳವಾರ, ಕಾಲೇಜಿನ ಮುಖ್ಯಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯ, ಪ್ರಾಂಶುಪಾಲರಾದ ಪ್ರೊ. ಎಸ್. ಪ್ರತಿಭಾ, ಮತ್ತು ಹಿರಿಯ ಸಂಶೋಧಕರಾದ ಡಾ. ಮಾಲಿನಿ ಎನ್. ಅಭ್ಯಂಕರ್ ಅವರು ಉಪಸ್ಥಿತರಿದ್ದರು.

ಪ್ರಾಂಶುಪಾಲರು

ಗೆ

ಸಂಪಾದಕರು

– – – – – – – – – – – – – –